678 (917) ಶ್ರೀ ಹಾಲಪ್ಪ ಹೆಚ್. (ಹೊಸನಗರ) – ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊಸನಗರ ವಿಧಾನ ಸಭಾ ವ್ಯಾಪ್ತಿಯಲ್ಲಿ ಬರುವ ಹೊಸನಗರ ಹಾಗೂ ಶಿವಮೊಗ್ಗ ತಾಲ್ಲೂಕುಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಟ್ರ್ಯಾಕ್ಟರ್ ಹಾಗೂ ಟಿಲ್ಲರ್‌ಗಳನ್ನು ಖರೀದಿಸಲು ಸಹಾಯ ಧನ ಪಡೆದ ರೈತರೆಷ್ಟು ;

ಆ) ಇವುಗಳಲ್ಲಿ ಟ್ರ್ಯಾಕ್ಟರ್ ಹಾಗೂ ಟಿಲ್ಲರ್‌ಗಳು ಚಾಲ್ತಿಯಿರುವುದೆಷ್ಟು ;

ಇ) ಚಾಲ್ತಿಯಲ್ಲಿಲ್ಲದಿರುವ ಟ್ರ್ಯಾಕ್ಟರ್ ಮತ್ತು ಟಿಲ್ಲರ್‌ಗಳೆಷ್ಟು ?

ಶ್ರೀ ಬಂಡೆಪ್ಪ ಕಾಶಂಪೂರ್ (ಕೃಷಿ ಸಚಿವರು) :

ಅ) ಹೊಸನಗರ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ 19 ರೈತರು ಟ್ರಾಕ್ಟರ್‌ಗಳನ್ನು ಹಾಗೂ 109 ರೈತರು ಟಿಲ್ಲರ್‌ಗಳನ್ನು ಖರೀದಿಸಲು ಸಹಾಯಧನ ಪಡೆದಿರುತ್ತಾರೆ.

ಆ) ಎಲ್ಲವೂ ಚಾಲ್ತಿಯಲ್ಲಿರುತ್ತದೆ.

ಇ) ಯಾವುದೂ ಇರುವುದಿಲ್ಲ.

682 (920) ಶ್ರೀ ಜೀವಿಜಯ ಬಿ.ಎ. (ಸೋಮವಾರಪೇಟೆ) – ಮಾನ್ಯ ತೋಟಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2006-07ನೇ ಸಾಲಿನಲ್ಲಿ ರಾಷ್ಟ್ರೀಯ ತೋಟಗಾರಿಕಾ ಮಿಷನ್ ನಿಂದ ರಾಜ್ಯ ಸರ್ಕಾರಕ್ಕೆ ಬಿಡುಗಡೆಯಾವ ಹಣವೆಷ್ಟು ;

ಆ) ಇದರಲ್ಲಿ ಕೊಡಗು ಜಿಲ್ಲೆಗೆ ಯಾವ ಯಾವ ಕಾರ್ಯಕ್ರಮಗಳಿಗೆ ಎಷ್ಟೆಷ್ಟು ಹಣವನ್ನು ಬಿಡುಗಡೆಗೊಳಿಸಲಾಗಿದೆ ?

ಶ್ರೀ ಶಶಿಕಾಂತ ಅಕ್ಕಪ್ಪ ನಾಯಕ್ (ತೋಟಗಾರಿಕೆ ಸಚಿವರು) –

ಅ) 2006-07ನೇ ಸಾಲಿಗೆ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಿಂದ ರಾಜ್ಯ ಸರ್ಕಾರಕ್ಕೆ ಬಿಡುಗಡೆಯಾದ ಹಣ ಇಂತಿದೆ.

ವರ್ಷ	ದಿನಾಂಕ	ಬಿಡುಗಡೆಯಾದ ಹಣ (ರೂ. ಕೋಟಿಗಳಲ್ಲಿ)
2006-07	26.6.2006	10.00
	10.1.2007	73.48